ಆ) ಲೋಪದೋಷಗಳ ಬಗ್ಗೆ ಸಾರ್ವಜನಿಕರಿಂದ ಸ್ವೀಕರಿಸಿರುವ ಅಹವಾಲುಗಳನ್ನು ಪೂರ್ಣಪ್ರಮಾಣದಲ್ಲಿ ವಿಲೇವಾರಿಗೊಳಿಸಿ, ಖಾಯಂ ಪಡಿತರ ಚೀಟಿ ವಿತರಣೆಗೆ ಕ್ರಮ ವಹಿಸಲಾಗುವುದು. ಇದಕ್ಕೆ 6 ತಿಂಗಳ ಕಾಲಾವಕಾಶದಲ್ಲಿ ಕ್ರಮವಹಿಸಲಾಗುವುದು.

ಇ) ಅಡುಗೆ ಅನಿಲ ಸಂಪರ್ಕ ಹೊಂದಿರದ ಎಲ್ಲಾ ವರ್ಗದ ಪಡಿತರ ಚೀಟಿದಾರರಿಗೆ ಸೀಮೆಎಣ್ಣೆಯನ್ನು ವಿತರಿಸಲಾಗುತ್ತಿದೆ.

ಈ) ಅನಿಲ ಸಂಪರ್ಕ ಹೊಂದಿದವರಿಗೆ ಸೀಮೆಎಣ್ಣೆ ವಿತರಿಸಲು ಸಾಧ್ಯವಾಗುವುದಿಲ್ಲ.

120 (253) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು) : ಮಾನ್ಯ ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ;

ಅ) ಸರ್ಕಾರದ ಅನ್ನಪೂರ್ಣ ಯೋಜನೆಯಲ್ಲಿ ಕಡುಬಡವರಿಗೆ 10 ಕೆಜಿ ಅಕ್ಕಿ ಧರ್ಮಾಥೇ ನೀಡಲಾಗುತ್ತಿದ್ದ ಈ ಯೋಜನೆಯನ್ನು ಈಗ ಕೈಬಿಡಲಾಗಿರುವುದು ನಿಜವೇ ;

ಆ) ಇಂತಹ ಜನಹಿತ ಕಾರ್ಯಕ್ರಮ ನಿಲ್ಲಿಸಲು ಕಾರಣವೇನು ;

ಇ) ಈ ಯೋಜನೆಯನ್ನು ಪುನಃ ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

ಶ್ರೀ ಗೋವಿಂದ ಎಂ. ಕಾರಜೋಳ (ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು):

ಅ) ಇಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಅನ್ನಪೂರ್ಣ ಯೋಜನೆಯಡಿ 25,452 ಫಲಾನುಭವಿಗಳಿಗೆ ತಾತ್ಕಾಲಿಕ ಪಡಿತರ ಕೂಪನ್‌ಗಳನ್ನು ವಿತರಿಸಲಾಗಿದೆ. ಈ ಎಲ್ಲಾ ಫಲಾನುಭವಿಗಳಿಗೆ 10 ಕೆಜಿ ಅಕ್ಕಿ ಉಚಿತವಾಗಿ ನೀಡಲಾಗುವುದು. ಇದಕ್ಕೆ ಸಂಬಂಧಿಸಿದಂತೆ ಆಡಳಿತಾತ್ಮಕ ವೆಚ್ಚವನ್ನು ಭರಿಸಲು ಸರ್ಕಾರಿ ಆದೇಶ ಸಂಖ್ಯೆ: ಕಂಇ 16 ಎಂಎಸ್‌ಟಿ 2006(1), ದಿನಾಂಕ: 25.1.2007 ರನ್ವಯ ರೂ. 77.51 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.